**<u>1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆ: 2751/2025</u>**

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

<u>ಆರೋಪಿತರು</u> : **1.** ಪ್ರದೀಪ.ಆರ್, ವಯಸ್ಸು ಸುಮಾರು 44 ವರ್ಷ,
ಬಿನ್ ದಿ: ರಾಮೇಗೌಡ, ವಾಸ: ಬಿಳ್ಳೂರು ಗ್ರಾಮ,
ಬಣಕಲ್ ಹೋಬಳಿ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**2.** ರಘು ಶೆಟ್ಟಿ, ವಯಸ್ಸು ಸುಮಾರು 60 ವರ್ಷ,
ಬಿನ್ ಸುಂದರ ಶೆಟ್ಟಿ, ಮಧುರಾ ಬಾರ್ ಮತ್ತು
ರೆಸ್ಟೋರೆಂಟ್ ಮಾಲೀಕರು, ವಾಸ: ಬಸ್
ನಿಲ್ದಾಣದ ಹಿಂಭಾಗ, ಮೂಡಿಗೆರೆ,
ಚಿಕ್ಕಮಗಳೂರು ಜಿಲ್ಲೆ.

<u>ದೋಷಾರೋಪಣೆ</u>

ಶ್ರೀಮತಿ ಸುರಕ್ಷ ಕೆ.ಕೆ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:-

ದಿನಾಂಕ 17.07.2025 ರಂದು ರಾತ್ರಿ 7.00 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಬಿಳ್ಳೂರು ಗ್ರಾಮದ ಸರ್ಕಲ್ ಹತ್ತಿರ 1 ನೇ ಆರೋಪಿಯಾದ ನೀವು ಅಕ್ರಮವಾಗಿ ಲಾಭ ಗಳಿಸುವ ಉದ್ದೇಶದಿಂದ ಯಾವುದೇ ಪರವಾನಗಿ ಇಲ್ಲದೇ ಕಾನೂನು ಬಾಹಿರವಾಗಿ 90 ಎಂ.ಎಲ್ ನ 72, ಡಿಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ನಿಮ್ಮ ವಶದಲ್ಲಿಟ್ಟುಕೊಂಡಿದ್ದು, ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 1 ನೇ ಆರೋಪಿಯಾದ ನೀವು 90 ಎಂ.ಎಲ್ ನ 72, ಡಿಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ಯಾವುದೇ ಪಾಸ್ ಅಥವಾ ಪರವಾನಗಿ ಇಲ್ಲದೇ ಅಕ್ರಮವಾಗಿ ನಿಮ್ಮ ವಶದಲ್ಲಿಟ್ಟುಕೊಂಡು ಪೊಲೀಸರು ನಡೆಸಿದ ದಾಳಿ

ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು 90 ಎಂ.ಎಲ್ ನ 72, ಡಿಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು 1 ನೇ ಆರೋಪಿಗೆ ಪರ್ಮಿಟ್ ನಲ್ಲಿ ಕಂಡ ಮಿತಿಗಿಂತ ಹೆಚ್ಚಾಗಿ ಮದ್ಯವನ್ನು ಮಾರಾಟ ಮಾಡಿರುತ್ತೀರಿ. ಈ ರೀತ್ಯಾ 2 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **36(1)(ಬಿ)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ***?*** ಅವುಗಳು ನಿಮಗೆ ಅರ್ಥವಾಯಿತೇ***?***

ಆರೋಪಿತರ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ***?***

ಆರೋಪಿತರ ಉತ್ತರಃ

***(***ದಿನಾಂಕ 24.04.2026 ರಂದು ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**Sd/-**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕಃ 24.04.2026